ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **523/2024**

ಪಿರ್ಯಾದಿ : ಶ್ರೀ ಎಸ್.ಪಿ. ಶ್ರೇಯಾಂಶ ಕುಮಾರ್,
ವಯಸ್ಸು ಸುಮಾರು 58 ವರ್ಷ,
ಬಿನ್ ಪದ್ಮನಾಭಯ್ಯ,
ವಾಸ: ಸಂಸೆ ಗ್ರಾಮ ಮತ್ತು ಅಂಚೆ,
ಕಳಸ ಹೋಬಳಿ ಮತ್ತು ತಾಲ್ಲೂಕು.

ವಿರುದ್ಧ

ಆರೋಪಿ : ಶ್ರೀ ವಿಜಯ್ ಕುಮಾರ್,
ವಯಸ್ಸು ಸುಮಾರು 48 ವರ್ಷ,
ಬಿನ್ ಜಾರ್ಜ್, ವಾಸ: ಪಾತಿಗುಡ್ಡೆ,
ಸಂಸೆ ಗ್ರಾಮ ಮತ್ತು ಅಂಚೆ,
ಕಳಸ ಹೋಬಳಿ ಮತ್ತು ತಾಲ್ಲೂಕು.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಳಿಗೋಸ್ಕರ ಪಿರ್ಯಾದುದಾರರಿಂದ 2,75,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಚಿಕ್ಕಮಗಳೂರು ಕೊಡಗು ಗ್ರಾಮೀಣ ಬ್ಯಾಂಕ್ (ಕರ್ನಾಟಕ ಗ್ರಾಮೀಣ ಬ್ಯಾಂಕ್), ಸಂಸೆ ಶಾಖೆಯ ಚೆಕ್ ಸಂಖ್ಯೆ: 706179, ದಿನಾಂಕ 19.10.2023, ರೂ.2,75,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಸದರಿ ಬ್ಯಾಂಕ್ ನಲ್ಲಿ ಜಮೆಗಾಗಿ ಸಲ್ಲಿಸಿದಾಗ, "Funds Insufficient" and "Cheque not Issued in CBS" ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 31.01.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

***(**ದಿನಾಂಕ 03.03.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ**,*** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು**.** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**sd/-**

ಮೂಡಿಗೆರೆ
ದಿನಾಂಕಃ 03.03.2025

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.